**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಚಿಂತಾಮಣಿ.**

**ಸಿ.ಸಿ.ನಂ.1002/2024**

| | | | |
|---|---|---|---|
| ಸಾಕ್ಷಿದಾರರ ಹೆಸರು | ಶ್ರವಣ್ | | |
| ಗಂಡಃತಂದೆಃಹೆಸರು | ನಾಗರಾಜ | ಪಿಡಬ್ಲೂಃ | 2 |
| ವಯಸ್ಸು | 29 ವರ್ಷ | ಸಿಡಬ್ಲೂಃ | 5 |
| ಉದ್ಯೋಗಃ | ಖಾಸಗಿ ಕೆಲಸ | | |
| ವಾಸ ಸ್ಥಳಃ | ಚಿನ್ನಸಂದ್ರ ಗ್ರಾಮ | | |

**ದಿನಾಂಕ 29-05-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ರವರಿಂದಃ-**

ಚಾ.ಸಾ.1 ರಿಂದ 4 ನನ್ನ ಸ್ನೇಹಿತರು. ಆರೋಪಿ ನನ್ನ ಸ್ನೇಹಿತ. ಪ್ರಕರಣದ ಬಗ್ಗೆ ನನಗೆ ಮಾಹಿತಿ ಇಲ್ಲ. ಚಾಸಾ 1 ಮತ್ತು ಆರೋಪಿತನ ನಡುವೆ ಗಲಾಟೆ ನಡೆದಿಲ್ಲ. ಆರೋಪಿತನು ಚಾಸಾ 1 ರವರಿಗೆ ಚಾಕು ಮತ್ತು ಕಲ್ಲಿನಿಂದ ಹೊಡೆದಿಲ್ಲ, ನನ್ನ ಮೊಬೈಲ್ ನ್ನು ಹೊಡೆದು ಹಾಕಿಲ್ಲ, ಚಾಸಾ 1 ರವರಿಗೆ ಅವಾಚ್ಯ ಶಬ್ದಗಳಿಂದ ಬೈದಿಲ್ಲ, ಪ್ರಾಣಬೆದರಿಕೆಯನ್ನು ಹಾಕಿಲ್ಲ.

ಸದರಿ ವಿಚಾರವಾಗಿ ನಾನು ಪೋಲೀಸರಿಗೆ ಹೇಳಿಕೆಯನ್ನು ನೀಡಿಲ್ಲ. ನ್ಯಾಯಾಲಯದ ಮುಂದಿರುವ ಚಾಕು ,ಕಲ್ಲನ್ನು ಮತ್ತು ಪೋನ್ ನ್ನು ನೋಡಿದರೆ ಗುರುತಿಸಲಾಗುವುದಿಲ್ಲ

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲುಃಃ ಮಾನ್ಯ ಸ ಸ ಅ ರವರಿಂದಃ-**

**ಸಿಡಬ್ಲೂಃ 5**

ದಿಃ 25-03-2024 ರಂದು ರಾತ್ರಿ ಸುಮಾರು 11.00 ಗಂಟೆ ಸಮಯದಲ್ಲಿ ಚಾಸಾ 1 ರವರು ಕೈವಾರ ಗ್ರಾಮದ ಗುಡಬಾವಿ ಬಳಿ ಇದ್ದಾಗ ಆರೋಪಿ ಚಾಸಾ 1 ರವರ ಬಳಿ ಬಂದು ಚಾಸಾ 1 ರವರ ಮೇಲೆ ಜಗಳ ತೆಗೆದು ಅವಾಚ್ಯ ಶಬ್ಧಗಳಿಂದ ಬೈದನು ಎಂದರೆ ಸರಿಯಲ್ಲ. ಚಾಸಾ 1 ರವರು ಏಕೆ ಎಂದು ಕೇಳಿದ್ದಕ್ಕೆ ಚಾಕುವಿನಿಂದ ಚಾಸಾ 1 ರವರ ಎಡಗಣ್ಣಿನ ಉಬ್ಬಿನ ಬಳಿ ತಿವಿದು ರಕ್ತಗಾಯ ಮಾಡಿರುತ್ತಾನೆ ಎಂದರೆ ಸರಿಯಲ್ಲ. ಆರೋಪಿ ಕಲ್ಲಿನಿಂದ ಚಾಸಾ 1 ರವರ ಕಿವಿ,ಬೆನ್ನು, ಎದೆಯ ಮೇಲೆ ಹೊಡೆದು ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದನು ಎಂದರೆ ಸರಿಯಲಲ. ಚಾಸಾ 1 ರವರ ಬಳಿ ಇದ್ದ ನನ್ನ ಮೊಬೈಲ್ ಫೋನ್ ನ್ನು ಹೊಡೆದು ಹಾಕಿ ಸುಮಾರು 30 ಸಾವಿರ ರೂ ನಷ್ಟ ಉಂಟು ಮಾಡಿದನು ಎಂದರೆ ಸರಿಯಲ್ಲ. ಚಾಸಾ 1 ರವರಿಗೆ ಪ್ರಾಣ ಬೆದರಿಕೆ ಹಾಕಿದನು ಎಂದರೆ ಸರಿಯಲ್ಲ. ಸದರಿ ವಿಚಾರವಾಗಿ ನಾನು ಪೋಲಿಸರಿಗೆ ಹೇಳಿಕೆಯನ್ನು ನೀಡಿರುತ್ತೇನೆಂದರೆ ಸರಿಯಲ್ಲ.

ಸದರಿ ವಿಚಾರವಾಗಿ ಪೋಲಿಸರಿಗೆ ಹೇಳಿಕೆಯನ್ನು ನೀಡಿರುತ್ತೇನೆಂದರೆ ಸರಿಯಲ್ಲ.

ಸಾಕ್ಷಿಗೆ ಹೇಳಿಕೆಯ ಅಂಶಗಳನ್ನು ಓದಿ ಹೇಳಲಾಗಿ ಸಾಕ್ಷಿಯು ಅಲ್ಲಗಳೆದಿರುವುದರಿಂದ ಸಾಕ್ಷಿಯು ಪೋಲಿಸರಿಗೆ ನೀಡಿದ ಮರುಹೇಳಿಕೆಯನ್ನು ನಿ.ಪಿ.3 ಎಂದು ಗುರುತಿಸಲಾಯಿತು.

ನಿಪಿ 3 ರ ಸಂಗತಿಗಳು ಗೊತ್ತಿದ್ದರುಆರೋಪಿತನೊಂದಿಗೆ ರಾಜಿ ಮಾಡಿಕೊಂಡಿದ್ದಕೋಸ್ಕರ ನಾನು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**<u>ಪಾಟೀಸವಾಲುಃ ಶ್ರೀ.ಆರ್.ಎಸ್.ಎಸ್. ಆರೋಪಿ ಪರ ವಕೀಲರಿಂದಃ- ಇಲ್ಲ.</u>**

**<u>ಮರು ವಿಚಾರಣೆ ಇಲ್ಲ.</u>**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸ ಇದೆ.**

ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚಿಂತಾಮಣಿ.